CollegeDekho
Discover • Prepare • Achieve
www.collegedekho.com

Subject Code : **01 (NS)**

# KANNADA

Time : 3 Hours 15 Minutes] [Total No. of questions : 55] [Max. Marks : 100

## ಅ - ವಿಭಾಗ

I. ಎಲ್ಲಾ ಪ್ರಶ್ನೆಗಳಿಗೆ **ಒಂದೊಂದು** ಪೂರ್ಣ ವಾಕ್ಯದಲ್ಲಿ ಉತ್ತರಿಸಿ. **(10 × 1 = 10)**

1) ರಾವಣನಿಗೆ ಯಾರ ಬಗ್ಗೆ ವೈರಾಗ್ಯ ಮೂಡಿತು?

2) ಹಗೆಯನ್ನು ಏನೆಂದು ಉಪೇಕ್ಷಿಸಬಾರದೆಂದು ಸೋಮನಾಥನು ಹೇಳಿದ್ದಾನೆ?

3) ಮುಂಬೈ ಜಾತಕದಲ್ಲಿ ಮಗು ತಾನಾಗಿ ಕಲಿತದ್ದು ಏನನ್ನು?

4) ಎಣ್ಣೆಯಲ್ಲಿ ನೆನೆದ ಬತ್ತಿ ಹೇಗೆ ಕಾಣುತ್ತದೆ?

5) ಅದೃಷ್ಟದ ಪ್ರಶ್ನೆ ಬಂದಾಗ ಶ್ರೀಮತಿ ನೇಮಿಚಂದ್ರರಿಗೆ ಯಾರ ನೆನಪಾಗುತ್ತದೆ?

6) ಕಲಾಂ ಅವರ ಕ್ರಿಯಾಶೀಲತೆಗೆ ಸಾಕ್ಷಿ ಯಾವುದು?

7) ಯಾವ ಕತೆ ಹೇಳಬೇಕೆಂದು ಮನೋರಮೆ ಕೇಳಿದಳು?

8) ಕೃಷ್ಣೇಗೌಡರ ಆನೆ ಮೊದಲು ಯಾವ ಮಠದಲ್ಲಿತ್ತು?

9) ಜಬ್ಬಾರ್ ವೆಟರ್ನರಿ ಆಸ್ಪತ್ರೆಗೆ ಬರಲು ಕಾರಣವೇನು?

10) ಆನೆಶಾಸ್ತ್ರದವನು ಏನೆಂದು ಭವಿಷ್ಯ ನುಡಿದಿದ್ದನು?

## ಆ - ವಿಭಾಗ

II. (ಅ) **ಯಾವುದಾದರೂ ನಾಲ್ಕು** ಪ್ರಶ್ನೆಗಳಿಗೆ ಎರಡು-ಮೂರು ವಾಕ್ಯದಗಳಲ್ಲಿ ಉತ್ತರಿಸಿರಿ. **(4 × 2 = 8)**

11) ಶಿವಪಥವನ್ನರಿಯದವನನ್ನು ಬಸವಣ್ಣನವರು ಹೇಗೆ ವಿಡಂಬಿಸಿದ್ದಾರೆ?

12) ಘೋರತರ ವಿಷ ಕುಡಿಯುವುದಾಗಿ ದ್ರೌಪದಿ ಏಕೆ ಹೇಳುತ್ತಾಳೆ?

13) ಶುಚಿ ಮತ್ತು ಸ್ವಾದಗಳನ್ನು ಕುರಿತು ಸೋಮನಾಥನ ಅಭಿಪ್ರಾಯವೇನು?

14) ಮುಂಬೈನ ಅವಸರದ ಜೀವನ ಚಿತ್ರಕ್ಕೆ ಎರಡು ಉದಾಹರಣೆ ನೀಡಿ.

15) ಅತ್ತೆಕ್ಕೆ ಕಮಟು ಹತ್ತುವುದು ಎಂದರೇನು?

(ಆ) **ಯಾವುದಾದರೂ ಮೂರು** ಪ್ರಶ್ನೆಗಳಿಗೆ ಎರಡು-ಮೂರು ವಾಕ್ಯಗಳಲ್ಲಿ ಉತ್ತರಿಸಿರಿ. **(3 × 2 = 6)**

16) ಕೊನೆಯಲ್ಲಿ ಬಸಲಿಂಗನಿಗೆ ಏನೆಂದು ನಿಶ್ಚಿತವಾಗತೊಡಗಿತ್ತು?

17) ಮುದ್ದೇಗೌಡರು ಪಥ್ಯದ ವಿಚಾರವಾಗಿ ಹೊಂದಿದ್ದ ನಿಲುವು ಯಾವುದು?

18) ಕಲಾಂ ಮೇಷ್ಟ್ರು ಹೇಳಿದ ಯಶಸ್ಸಿನ ಪಂಚಾಕ್ಷರಿ ಮಂತ್ರ ಯಾವುದು?

19) ವೀರೇಂದ್ರ ಸಿಂಪಿ ಹೇಳುವಂತೆ ಭಾವೈಕ್ಯತೆ ಈ ದೇಶದಲ್ಲಿ ಎಲ್ಲಿದೆ? ಅದು ಹೇಗೆ?

(ಇ) **ಯಾವುದಾದರೂ ಮೂರು** ಪ್ರಶ್ನೆಗಳಿಗೆ ಎರಡು-ಮೂರು ವಾಕ್ಯಗಳಲ್ಲಿ ಉತ್ತರಿಸಿರಿ. **(3 × 2 = 6)**

20) ದುರ್ಗಪ್ಪ ಏಕೆ ಬಂದಿರಬಹುದೆಂದು ನಿರೂಪಕರು ಯೋಚಿಸಿದರು?

21) ಸೊರಗಿದ್ದ ಆನೆಯನ್ನು ಕೃಷ್ಣೇಗೌಡ ಹೇಗೆ ಸಾಕಿದ?

22) ಹುಚ್ಚುನಾಯಿಗಳು ಆಸ್ಪತ್ರೆಯಲ್ಲಿ ಹೇಗೆ ವರ್ತಿಸುತ್ತವೆಂದು ಪುಟ್ಟಯ್ಯ ಹೇಳಿದನು?

23) ಆನೆಯನ್ನು ಹದ್ದುಬಸ್ತಿನಲ್ಲಿಡುವುದರ ಬಗ್ಗೆ ವೇಲಾಯುಧನ ಅಪ್ಪ ಏನು ತಿಳಿಸಿದ್ದ?

## ಇ - ವಿಭಾಗ

III. (ಅ) **ಯಾವುದಾದರೂ ಎರಡು** ವಾಕ್ಯಗಳ ಸಂದರ್ಭ ಸೂಚಿಸಿ, ಸ್ವಾರಸ್ಯ ಬರೆಯಿರಿ. **(2 × 3 = 6)**

24) ತಾನೆ ಲಘುಮಾಡಿ ಲಘುವಾದನಯ್ಯ.

25) ಕುಸುಮವಾಸನೆಯಿಲ್ಲ ಕೂಡಲು ಸ್ಥಳವಿಲ್ಲ.

26) ಇನ್ನೊಂದು ಸೇರ್ಪಡೆ ಆ ಲೀಲಾಮಾತ್ರನಿಗೆ.

(ಆ) **ಯಾವುದಾದರೂ ಒಂದು** ವಾಕ್ಯ ಕುರಿತು ಸಂದರ್ಭ ಸೂಚಿಸಿ, ಸ್ವಾರಸ್ಯ ಬರೆಯಿರಿ. **(1 × 3 = 3)**

27) ನೀರು ಬಿದ್ದರೆ ಕಣ್ಣು ಕೆಟ್ಟುಹೋಗುವ ಅಪಾಯ ಇದೆ.

28) ಕನ್ನಡಂ ಕತ್ತುರಿಯಲ್ತೆ.

(ಇ) **ಯಾವುದಾದರೂ ಒಂದು** ವಾಕ್ಯ ಕುರಿತು ಸಂದರ್ಭ ಸೂಚಿಸಿ, ಸ್ವಾರಸ್ಯ ಬರೆಯಿರಿ. **(1 × 3 = 3)**

29) ನಮ್ಮ ಕಡೆ ಕೆಮ್ಮು ಕಾಲಿಂಗ್‌ಬೆಲ್ ಇದ್ದ ಹಾಗೆ.

30) ಕೋವಿ ಸಿಕ್ಕಿದೆ, ಆದರೆ ಹೆಣ ಸಿಗಲಿಲ್ಲ.

## ಈ - ವಿಭಾಗ

IV. (ಅ) **ಯಾವುದಾದರೂ ಮೂರು** ಪ್ರಶ್ನೆಗಳಿಗೆ ಐದಾರು ವಾಕ್ಯಗಳಲ್ಲಿ ಉತ್ತರಿಸಿರಿ. **(3 × 4 = 12)**

31) ದ್ರೌಪದಿ ಅವಮಾನಕ್ಕೊಳಗಾದ ಮೂರು ಪ್ರಸಂಗಗಳನ್ನು ವಿವರಿಸಿ.

32) ಗರತಿ ತವರಿಗೆ ಏನೆಂದು ಹರಸುತ್ತಾಳೆ?

33) ಯಾವ ಸ್ಥಳಗಳಲ್ಲಿ ಜೀಸಸ್ ದಿನನಿತ್ಯ ಶಿಲುಬೆ ಏರಿದ್ದಾನೆ? ಚರ್ಚಿಸಿರಿ.

34) 'ಒಮ್ಮೆ ನಗುತ್ತೇವೆ' ಎಂಬ ಕವಿತೆಯಲ್ಲಿ ವ್ಯಕ್ತವಾಗುವ ನಗುವಿನ ವೈಶಿಷ್ಟ್ಯ ವಿವರಿಸಿ.

(ಆ) **ಯಾವುದಾದರೂ ಎರಡು** ಪ್ರಶ್ನೆಗಳಿಗೆ ಐದಾರು ವಾಕ್ಯಗಳಲ್ಲಿ ಉತ್ತರಿಸಿರಿ. **(2 × 4 = 8)**

35) ಸಿಂಹಬಾಲದ ಕೋತಿಗಳು ಮತ್ತು ಹಾಡುಹಕ್ಕಿಗಳಿಗಾದ ಅನನುಕೂಲಗಳಾವುವು?

36) ಕೇಂದ್ರ ಸರ್ಕಾರದ ಕಛೇರಿಗಳಲ್ಲಿ ಕನ್ನಡತನವಿಲ್ಲದಿರುವ ಬಗ್ಗೆ ಹಾಮಾನಾ ಹೇಗೆ ಟೀಕಿಸಿದ್ದಾರೆ?

37) ಚಿನ್ನಮ್ಮ ಬೆಳ್ಳಿ ಲೋಟವನ್ನು ಮತ್ತೆ ಹೊಳೆಗೆ ಎಸೆಯಲು ಕಾರಣವೇನು? ವಿಶ್ಲೇಷಿಸಿ.

CollegeDekho
Discover • Prepare • Achieve
www.collegedekho.com

(ಇ) **ಯಾವುದಾದರೂ ಎರಡು** ಪ್ರಶ್ನೆಗಳಿಗೆ ಐದಾರು ವಾಕ್ಯಗಳಲ್ಲಿ ಉತ್ತರಿಸಿರಿ. **(2 × 4 = 8)**

38) ಆನೆ ಮತ್ತು ಮಾವುತ ವೇಲಾಯುಧನನ್ನು ಸಾಗ ಹಾಕಲು ಮಠದವರು ಹವಣಿಸಿದ್ದೇಕೆ?

39) ದುರ್ಗಪ್ಪನಿಗೆ ಲೈನ್‌ಮನ್ ಕೆಲಸ ರೋಸಿ ಹೋಗಲು ಕಾರಣವೇನು?

40) ಡ್ರೈವರ್ ಅಬ್ಬಾಸ್ ಮತ್ತು ಕ್ಲೀನರ್ ಕೃಷ್ಣನ ಸಾವಿಗೆ ಕೃಷ್ಣೇಗೌಡರ ಆನೆ ಕಾರಣವೆ? ವಿವರಿಸಿ.

**ಉ - ವಿಭಾಗ**

V. **ಯಾವುದಾದರೂ ಒಂದು** ಪದ್ಯದ ಭಾವಾರ್ಥವನ್ನು ಬರೆಯಿರಿ. **(1 × 5 = 5)**

41) ಕರುಣಿಸುವೊಡೆನಗೆ ದಶಕಂ
ಧರ ಧುರದೊಳ್‌ರಘುತನೂಜನಾಯುಃ ಪ್ರಾಣಂ
ಬರೆಗಂ ಬಾರದಿರೆನುತುಂ
ಧರಿತ್ರಿಯೊಳ್ ಮೈಯನೊಕ್ಕು ಮೂರ್ಛೆಗೆ ಸಂದಳ್

42) ಏಳು ಚಿನ್ನ , ಬೆಳಗಾಯ್ತು ಅಣ್ಣ ಮೂಡಲವು ತೆರೆಯ ಕಣ್ಣ
ನಕ್ಷತ್ರ ಜಾರಿ, ತಮವೆಲ್ಲ ಸೋರಿ, ಮಿಗಿಲಹುದು ಬಾನ ಬಣ್ಣ
ಜೇನ್ಗೊಣದ ಹೆದೆಗೆ, ಹೂಬಾಣ ಹೂಡಿ, ಝುಂ ಎಂದು ಬಿಟ್ಟ ಮಾರ
ಗುಡಿಗೋಪುರಕ್ಕು, ಬಲೆ ಬೀಸಿ ಬಂದ, ಅಗೊ ಬೆಳಕು - ಬೇಟೆಗಾರ.

**ಭಾಷಾಭ್ಯಾಸ**

VI. (ಅ) ಕೆಳಗಿನ ಪ್ರಶ್ನೆಗಳಲ್ಲಿ **ಯಾವುದಾದರೂ ಆರಕ್ಕೆ** ಸೂಚನೆಗೆ ಅನುಗುಣವಾಗಿ ಉತ್ತರಿಸಿರಿ.
**(6 × 2 = 12)**

43) ಈ ಪದಗಳ ಅರ್ಥ ಬರೆಯಿರಿ.

1) ಪುಳಕ

2) ಹಾಸುಗಂಬಿ

44) ಈ ಪದಗಳಿಗೆ ನಾನಾರ್ಥ ಬರೆಯಿರಿ.

1) ಹದ್ದು

2) ಕವಿ

45) ಈ ಪದಗಳಿಗೆ ಗುಣವಾಚಕಗಳನ್ನು ಬರೆಯಿರಿ.

1) ಹುಸಿನಿದ್ದೆ

2) ಬೆಳ್ಳಿಲೋಟ

46) ಈ ಪದಗಳ ವಿಭಕ್ತಿಯನ್ನು ಬರೆಯಿರಿ.

1) ಗದ್ಯದೊಳ್

2) ಯಮಸುತಂಗೆ

47) ಈ ಕ್ರಿಯಾಪದಗಳ 'ಧಾತು' ಬರೆಯಿರಿ

1) ಕಂಡರು

2) ಹೇಳಿದಾಗ

48) ಈ ಕ್ರಿಯಾಪದಗಳನ್ನು ನಿಷೇಧಾರ್ಥಕ ರೂಪದಲ್ಲಿ ಬರೆಯಿರಿ.

1) ನೋಡುವಳು

2) ಆಡಿದರು

49) ಈ ನುಡಿಗಟ್ಟುಗಳನ್ನು ಸ್ವಂತ ವಾಕ್ಯದಲ್ಲಿ ಬಳಸಿ ಬರೆಯಿರಿ.

1) ದಾರಿದೀಪ

2) ತಲೆದೂಗು

CollegeDekho
Discover • Prepare • Achieve

www.collegedekho.com

(ಆ) **ಯಾವುದಾದರೂ ಒಂದನ್ನು** ಕುರಿತು ಪ್ರಬಂಧ ಬರೆಯಿರಿ. **(1 × 5 = 5)**

50) ಮಾತೃ ಭಾಷೆಯಲ್ಲಿ ಶಿಕ್ಷಣ.

51) ಮತದಾನದ ಮಹತ್ವ.

(ಇ) **ಯಾವುದಾದರೂ ಒಂದನ್ನು** ಕುರಿತು ಪತ್ರ ಬರೆಯಿರಿ. **(1 × 4 = 4)**

52) ನಿಮ್ಮೂರ ಜಾತ್ರೆಗೆ ಆಹ್ವಾನಿಸಿ ಸ್ನೇಹಿತರಿಗೊಂದು ಪತ್ರ ಬರೆಯಿರಿ.

53) ಸೂಕ್ತ ಬಸ್ ಸಂಪರ್ಕ ವ್ಯವಸ್ಥೆ ಕುರಿತು ಇಲಾಖಾ ಮುಖ್ಯಸ್ಥರಿಗೆ ಪತ್ರ ಬರೆಯಿರಿ.

(ಈ) ಕೆಳಗಿನ ಗಾದೆ ಮಾತುಗಳಲ್ಲಿ **ಒಂದನ್ನು** ವಿಸ್ತರಿಸಿ ಬರೆಯಿರಿ. **(1 × 4 = 4)**

54) ಹಣಕ್ಕಿಂತ ಗುಣ ಮುಖ್ಯ.

55) ಬುದ್ಧಿವಂತ ಬರೀತಾನೆ, ವಿವೇಕಿ ಅರಿತಾನೆ.